**All India Radio: Bangalore**
**National Bulletin In Kannada**
**26.02.2025  13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**26.02.2025  13.10 p.m.**
*****************

ಮುಖ್ಯಾಂಶಗಳು

೧.  ಬಿಹಾರ ಪ್ರವಾಸದ ನಂತರ ಮಧ್ಯಪ್ರದೇಶಕ್ಕೆ ತೆರಳಿದ ರಾಷ್ಟ್ರಪತಿ ದ್ರೌಪದಿ ಮುರ್ಮು

೨.  ಕೆಲವೇ ವರ್ಷಗಳಲ್ಲಿ ಬಾಹ್ಯಾಕಾಶ ಆರ್ಥಿಕತೆ ಐದು ಪಟ್ಟು ಏರಿಕೆ - ಸಚಿವ ಡಾ.ಜಿತೇಂದ್ರ ಸಿಂಗ್

೩.  ಇಂದು ಮಹಾಶಿವರಾತ್ರಿ; ಕೋಯಮತ್ತೂರಿನ ಈಶಾ ಫೌಂಡೇಶನ್ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಅಮಿತ್ ಶಾ ಭಾಗಿ

೪.  ರಣಜಿ ಕ್ರಿಕೆಟ್; ಫೈನಲ್ ಪಂದ್ಯದಲ್ಲಿ  ಕೇರಳ- ವಿದರ್ಭ ತಂಡಗಳು ಮುಖಾಮುಖಿ

೫.  ದುಬೈ ಓಪನ್ ಟೆನಿಸ್; ಪ್ರಿ-ಕ್ವಾರ್ಟರ್ ಫೈನಲ್ಸ್‌ನಲ್ಲಿಂದು ಆಡಲಿರುವ ರೋಹನ್ ಬೋಪಣ್ಣ, ಇವಾನ್ ಡೋಡಿಗ್ ಜೋಡಿ

*****************

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಬಿಹಾರ ಪ್ರವಾಸದ ನಂತರ ಮಧ್ಯಪ್ರದೇಶಕ್ಕೆ ಭೇಟಿ ನೀಡಿದ್ದಾರೆ. ಪಾಟ್ನಾ ವಿಮಾನ ನಿಲ್ದಾಣದಿಂದ ನಿರ್ಗಮಿಸಿದ ರಾಷ್ಟ್ರಪತಿಯವರನ್ನು ಬಿಹಾರ ರಾಜ್ಯಪಾಲ ಆರೀಫ್ ಮೊಹಮ್ಮದ್ ಖಾನ್, ಮುಖ್ಯಮಂತ್ರಿ ನಿತಿಶ್ ಕುಮಾರ್ ಮತ್ತಿತರ ಗಣ್ಯರು ಬೀಳ್ಕೊಟ್ಟರು.

ನಂತರ ಅವರು, ಮಧ್ಯಪ್ರದೇಶದ ಖಜೂರಾವ್‌ಗೆ ತಲುಪಿದರು. ಅಲ್ಲಿನ ವಿಮಾನ ನಿಲ್ದಾಣದಲ್ಲಿ ಮಧ್ಯಪ್ರದೇಶ ಮುಖ್ಯಮಂತ್ರಿ ಡಾ.ಮೋಹನ್ ಯಾದವ್, ಕೇಂದ್ರ ಸಚಿವ ವಿರೇಂದ್ರ ಕುಮಾರ್ ಮತ್ತಿತರರು ಸ್ವಾಗತಿಸಿದರು.

ಮಧ್ಯಪ್ರದೇಶದ ಛತ್ತರ್‌ಪುರ ಜಿಲ್ಲೆಯ ಬಾಗೇಶ್ವರ ಧಾಮದಲ್ಲಿ ನಡೆಯುವ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ರಾಜ್ಯಪಾಲ ಮಂಗುಭಾಯಿ ಪಟೇಲ್, ಮುಖ್ಯಮಂತ್ರಿ ಡಾ. ಮೋಹನ್ ಯಾದವ್, ಕ್ರಿಕೆಟಿಗರು, ಕಲಾವಿದರು ಮತ್ತು ಇತರ ಗಣ್ಯರು ಈ ಸಂದರ್ಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಛತ್ತರ್‌ಪುರ ಜಿಲ್ಲಾ ಕೇಂದ್ರದಿಂದ ಸುಮಾರು ೨೩ ಕಿಲೋಮೀಟರ್ ದೂರದಲ್ಲಿರುವ ಗರ್ಹಾ ಗ್ರಾಮದಲ್ಲಿ ಶ್ರೀ ಬಾಗೇಶ್ವರ ಜನ ಸೇವಾ ಸಮಿತಿಯಿಂದ ಸಾಮೂಹಿಕ ವಿವಾಹ ಸಮಾರಂಭವನ್ನು ಆಯೋಜಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ನವವಿವಾಹಿತರನ್ನು ಆಶೀರ್ವದಿಸಲಿದ್ದಾರೆ. ೨೫೧ ವಧುಗಳ ಪೈಕಿ ೨೨೫ ಬುಡಕಟ್ಟು, ದಲಿತ ಮತ್ತು ಒಬಿಸಿ ವರ್ಗಕ್ಕೆ ಸೇರಿದವರಾಗಿದ್ದಾರೆ.

ಇವರಲ್ಲಿ ಮಧ್ಯಪ್ರದೇಶ, ಯುಪಿ, ಬಿಹಾರ, ಮಹಾರಾಷ್ಟ್ರ, ಜಾರ್ಖಂಡ್ ಸೇರಿದಂತೆ ವಿವಿಧ ರಾಜ್ಯಗಳ ವಧುಗಳು ಸೇರಿದ್ದಾರೆ. ರಾಷ್ಟ್ರಪತಿಗಳ ಭೇಟಿ ಧಾರ್ಮಿಕ ಮತ್ತು ಸಾಮಾಜಿಕ ದೃಷ್ಟಿಕೋನದಿಂದ ಮುಖ್ಯವಾದುದು ಮಾತ್ರವಲ್ಲದೆ, ಬುಂದೇಲ್‌ಖಂಡ್ ಪ್ರದೇಶದ ಅಭಿವೃದ್ಧಿಯ ಪ್ರಯತ್ನಗಳಿಗೆ ಪ್ರಚೋದನೆಯನ್ನು ನೀಡುತ್ತದೆ. ಪ್ರಧಾನಿ ನರೇಂದ್ರ ಮೋದಿ ಇತ್ತೀಚೆಗೆ ಬಾಗೇಶ್ವರ ಧಾಮದಲ್ಲಿ ಕ್ಯಾನ್ಸರ್ ಆಸ್ಪತ್ರೆಯ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು.

*****************

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಅರುಣಾಚಲ ಪ್ರದೇಶಕ್ಕೆ ಭೇಟಿ ನೀಡಿದ್ದಾರೆ. ಉಪರಾಷ್ಟ್ರಪತಿಯವರನ್ನು ಇಂದು ಇಟಾನಗರ್ ವಿಮಾನ ನಿಲ್ದಾಣದಲ್ಲಿ ಅರುಣಾಚಲ ಪ್ರದೇಶ ರಾಜ್ಯಪಾಲ ಲೆಫ್ಟಿನೆಂಟ್ ಜನರಲ್ ಕೈವಲ್ಯ ತ್ರಿವಿಕ್ರಮ್ ಪರ್ನಾಯಕ್ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಅರುಣಾಚಲ ಪ್ರದೇಶದ ಕಮ್ಲೆ ಜಿಲ್ಲೆಯ ಕಂಪೋರಿಜೊ ವೃತ್ತದ ಬೋಸಿಮ್ಲಾದಲ್ಲಿ ನಡೆಯುವ ಮೊದಲ ಜಂಟಿ ಮೆಗಾ ನ್ಯೋಕುಮ್ ಯುಲ್ಲೊ ಸಾಂಸ್ಕೃತಿಕ ಉತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಹ ಭಾಗಿಯಾಗಲಿದ್ದಾರೆ.

ನ್ಯೋಕುಮ್ ರಾಜ್ಯದ ನ್ಯೋಶಿ ಬುಡಕಟ್ಟು ಜನಾಂಗದವರು ಆಚರಿಸುವ ಹಬ್ಬವಾಗಿದೆ. ಮನುಕುಲದ ಶ್ರೇಯಸ್ಸು, ಉತ್ಪಾದಕತೆ, ಸಮೃದ್ಧಿ ಮತ್ತು ಸಂತೋಷಕ್ಕಾಗಿ ಈ ಹಬ್ಬವನ್ನು ಆಚರಿಸಲಾಗುತ್ತದೆ.

*****************

ಮುಂದಿನ ಕೆಲವು ವರ್ಷಗಳಲ್ಲಿ ಭಾರತದ ಬಾಹ್ಯಾಕಾಶ ಆರ್ಥಿಕತೆ ೮ ಶತಕೋಟಿ ಡಾಲರ್‌ನಿಂದ ೪೪ ಶತಕೋಟಿ ಡಾಲರ್‌ಗೆ ಏರಿಕೆಯಾಗಲಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ಬಾಹ್ಯಾಕಾಶ ಆರ್ಥಿಕತೆ ಐದು ಪಟ್ಟು ಏರಿಕೆಯಾಗಲಿದ್ದು, ಭಾರತದ ಆರ್ಥಿಕತೆಯನ್ನು ಬಲವರ್ಧನೆಗೊಳಿಸಲಿದೆ. ವಿಕಸಿತ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸಲಿದೆ ಎಂದು ಅವರು ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಡಿ ೨೦೧೩-೧೪ನೇ ಸಾಲಿನಲ್ಲಿ ಬಾಹ್ಯಾಕಾಶ ವಲಯಕ್ಕೆ ೫ ಸಾವಿರದ ೬೧೫ ಕೋಟಿ ರೂಪಾಯಿ ಶಾಸನಬದ್ಧ ಮೊತ್ತ ೨೦೨೫-೨೬ನೇ ಸಾಲಿಗೆ ೧೩ ಸಾವಿರದ ೪೧೬ ಕೋಟಿ ರೂಯಿಗೆ ಏರಿಕೆಯಾಗಿದೆ. ೨೦೧೪ರ ನಂತರ ದೇಶದ ಬಾಹ್ಯಾಕಾಶಯಾನ ಮಹತ್ವದ ಹಂತದಲ್ಲಿದ್ದು, ಖಾಸಗಿ ವಲಯ ಪಾಲ್ಗೊಳ್ಳುವಿಕೆಯ ಜೊತೆಗೆ ವಿದೇಶಿ ನೇರ ಹೂಡಿಕೆ ಕ್ಷೇತ್ರದಲ್ಲೂ ಗಮನಾರ್ಹ ಸಾಧನೆ ಮಾಡಿದೆ ಎಂದು ಹೇಳಿದ್ದಾರೆ.

****************

ರಾಜಸ್ಥಾನದಲ್ಲಿ ಮಾರ್ಚ್ ೩ ರಿಂದ ೧೨ನೇ ಪ್ರಾದೇಶಿಕ-೩ಆರ್ ಮತ್ತು ಏಷ್ಯಾ ಆರ್ಥಿಕ ಒಕ್ಕೂಟದ ಸಮ್ಮೇಳನ ನಡೆಯಲಿದೆ.

ಮೂರು ದಿನಗಳ ಆರ್ಥಿಕ ಒಕ್ಕೂಟದ ಮಹತ್ವದ ಸಮ್ಮೇಳನವನ್ನು ಜೈಪುರ್‌ನಲ್ಲಿ ಆಯೋಜಿಸಲಾಗಿದೆ. ' ೩ಆರ್ ' ಅಂದರೆ, 'ರೆಡ್ಯೂಸ್, ರೀಸೈಕಲ್ ಮತ್ತು ರೀಯೂಸ್' ಎಂಬುದಾಗಿದೆ.

ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವ ನಿಟ್ಟಿನಲ್ಲಿ ಸಮಾಜದ ಪಾತ್ರದ ಬಗ್ಗೆ ಸಮ್ಮೇಳನದಲ್ಲಿ ಚರ್ಚೆ ನಡೆಯಲಿದೆ. ಮಾಲಿನ್ಯ ತಗ್ಗಿಸುವ, ಮರು ಸಂಸ್ಕರಣೆ ಮತ್ತು ಮರು ಬಳಕೆ ಕುರಿತಂತೆ ಜನಜಾಗೃತಿ ಮೂಡಿಸಿ, ಏಷ್ಯಾ ಪೆಸಿಫಿಕ್ ವಲಯದಲ್ಲಿ ಇಂಗಾಲ ಹೊರಸೂಸುವಿಕೆಯನ್ನು ತಟಸ್ಥಗೊಳಿಸುವ ಗುರಿ ಹೊಂದಲಾಗಿದೆ. ಶೂನ್ಯ ತ್ಯಾಜ್ಯ ಸಮಾಜ ನಿರ್ಮಿಸುವ ಮಹತ್ವಾಕಾಂಕ್ಷಿಯಿಂದ ಈ ಸಮ್ಮೇಳನ ಆಯೋಜಿಸಲಾಗಿದೆ.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಮಾತನಾಡಿ, ೨೫ ದೇಶಗಳು ಮತ್ತು ೫೦೦ ಕ್ಕೂ ಅಧಿಕ ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

****************

ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರ ವೀರ್ ಸಾವರ್ಕರ್ ಅವರ ಪುಣ್ಯ ತಿಥಿ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಅವರು, ತ್ಯಾಗ, ಶೌರ್ಯ ಮತ್ತು ಸಂಘರ್ಷದ ಮೂಲಕ ಸ್ವಾತಂತ್ರ್ಯ ಹೋರಾಟದಲ್ಲಿ ತೊಡಗಿದ ವೀರ್ ಸಾವರ್ಕರ್ ಅವರ ಅವಿಸ್ಮರಣೀಯ ಕೊಡುಗೆಯನ್ನು ದೇಶ ಎಂದಿಗೂ ಮರೆಯುವುದಿಲ್ಲ ಎಂದು ಹೇಳಿದ್ದಾರೆ.

****************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ರಾತ್ರಿ ತಮಿಳುನಾಡಿನ ಕೊಯಮತ್ತೂರಿಗೆ ಆಗಮಿಸಿದರು.

ಅವರನ್ನು ಕೇಂದ್ರ ರಾಜ್ಯ ಸಚಿವ ಡಾ. ಎಲ್. ಮುರುಗನ್ ಮತ್ತು ರಾಜ್ಯದ ಇತರ ಬಿಜೆಪಿ ನಾಯಕರು ಸ್ವಾಗತಿಸಿದರು.

ಅಮಿತ್ ಶಾ ಅವರು ಇಂದು ಕೊಯಮತ್ತೂರಿನಲ್ಲಿ ಬಿಜೆಪಿ ಕಚೇರಿಯನ್ನು ಉದ್ಘಾಟಿಸಿದರು. ಈ ರಾತ್ರಿ ಕೊಯಮತ್ತೂರು ಬಳಿಯ ಇಶಾ ಕೇಂದ್ರದಲ್ಲಿ ನಡೆಯುವ ಶಿವರಾತ್ರಿ ಆಚರಣೆಯಲ್ಲಿಯೂ ಭಾಗವಹಿಸಲಿದ್ದಾರೆ.

*****************

ಇಂದು ಮಹಾಶಿವರಾತ್ರಿ ಹಬ್ಬವನ್ನು ದೇಶದೆಲ್ಲೆಡೆ ಸಡಗರದಿಂದ ಆಚರಿಸಲಾಗುತ್ತಿದೆ.

ದೇಶದ ಜನತೆಗೆ ಗಣ್ಯರು ಮಹಾಶಿವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಶುಭ ಕೋರಿದ್ದಾರೆ. ರಾಷ್ಟ್ರಪತಿ ದ್ರೌಪತಿ ಮುರ್ಮು, ಉಪಾರಾಷ್ಟ್ರಪತಿ ಜಗದೀಪ್ ಧನಕರ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಶುಭ ಹಾರೈಸಿದ್ದಾರೆ.

*****************

ಕೊಂಕಣ ಮತ್ತು ಗೋವಾ, ಕರಾವಳಿ ಕರ್ನಾಟಕ, ಉತ್ತರ ಕೇರಳ ಮತ್ತು ಮಾಹೆಯಲ್ಲಿ ಇಂದು ಬಿಸಿ ಅಲೆಯ ವಾತಾವರಣ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಕರ್ನಾಟಕದಲ್ಲಿ ಮುಂದಿನ ೨-೩ ನಗಳವರೆಗೆ ಬಿಸಿ ಅಲೆಯ ವಾತಾವರಣ ಮುಂದುವರಿಯುವ ಸಾಧ್ಯತೆಯಿದೆ. ಜಮ್ಮು ಮತ್ತು ಕಾಶ್ಮೀರ, ಲಡಾಖ್, ಗಿಲ್ಗಿಟ್, ಬಾಲ್ಟಿಸ್ತಾನ್, ಮುಜಫರಾಬಾದ್ ಮತ್ತು ಹಿಮಾಚಲ ಪ್ರದೇಶದಲ್ಲಿ ಇಂದು ಭಾರೀ ಮಳೆ ಅಥವಾ ಹಿಮಪಾತವಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಉತ್ತರಾಖಂಡ, ಪಂಜಾಬ್, ಹರಿಯಾಣ, ಚಂಡೀಗಢ, ದೆಹಲಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಮತ್ತು ಹಿಮಾಚಲ ಪ್ರದೇಶಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ ಎಂದು ಐಎಂಡಿ ತಿಳಿಸಿದೆ. ಮುಂದಿನ ೨ ದಿನಗಳಲ್ಲಿ ಗುಜರಾತ್ ಬಿಸಿ ಮತ್ತು ಆರ್ದ್ರ ವಾತಾವರಣವನ್ನು ಅನುಭವಿಸಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

****************

ನಾಗ್ಪುರದಲ್ಲಿ ನಡೆಯುತ್ತಿರುವ ರಣಜಿ ಪಂದ್ಯದಲ್ಲಿ ಕೇರಳ ಹಾಗೂ ವಿದರ್ಭ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಕೇರಳ ಬೌಲಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿ ಬಂದಾಗ ವಿದರ್ಭ____ ೩ ವಿಕೆಟ್ ನಷ್ಟಕ್ಕೆ _____ ೮೬ ರನ್ ಗಳಿಸಿ ಆಡುತ್ತಿದೆ.

ಕೇರಳ ಹಾಗೂ ಗುಜರಾತ್ ನಡುವಿನ ಪಂದ್ಯ ಡ್ರಾ ನಲ್ಲಿ ಅಂತ್ಯ ಕಂಡಿದ್ದು, ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ ಎರಡು ರನ್‌ಗಳ ಮುನ್ನಡೆಯೊಂದಿಗೆ ಕೇರಳ ತಂಡ ಮೊದಲ ಬಾರಿಗೆ ಫೈನಲ್‌ಗೆ ಅರ್ಹತೆ ಪಡೆದುಕೊಂಡಿತ್ತು.

****************

ದುಬೈ ಓಪನ್‌ನ ಪುರುಷರ ಡಬಲ್ಸ್ ಟೆನಿಸ್‌ನಲ್ಲಿ, ಭಾರತದ ಯೂಕಿ ಭಾಂಬ್ರಿ ಮತ್ತು ಅವರ ಆಸ್ಟ್ರೇಲಿಯಾದ ಜೊತೆಗಾರ ಅಲೆಕ್ಸಿ ಪೊಪಿರಿನ್ ಜೋಡಿ ಕ್ವಾರ್ಟರ್ ಫೈನಲ್ಸ್‌ಗೆ ಪ್ರವೇಶಿಸಿದ್ದಾರೆ.

ಇಂಡೋ-ಆಸ್ಟ್ರೇಲಿಯನ್ ಜೋಡಿ, ಎಲ್ ಸಾಲ್ವಡಾರ್‌ನ ಮಾರ್ಸೆಲೊ ಅರೆವಾಲೊ ಮತ್ತು ಕ್ರೊಯೇಷಿಯಾದ ಮೇಟ್ ಪವಿಕ್ ಅವರನ್ನು ೪-೬, ೭-೬, ೧೦-೩ ಸೆಟ್‌ಗಳಿಂದ ಸೋಲಿಸಿದರು.

ಏತನ್ಮಧ್ಯೆ, ಅನುಭವಿ ಭಾರತೀಯ ಟೆನಿಸ್ ಆಟಗಾರ ರೋಹನ್ ಬೋಪಣ್ಣ ಮತ್ತು ಅವರ ಕ್ರೊಯೇಷಿಯಾದ ಜೊತೆಗಾರ ಇವಾನ್ ಡೋಡಿಗ್ ಇಂದು ಸಂಜೆ ಮತ್ತೊಂದು ಪ್ರಿ-ಕ್ವಾರ್ಟರ್ ಫೈನಲ್ಸ್‌ನಲ್ಲಿ ಬ್ರಿಟಿಷ್ ಜೋಡಿ ಜೂಲಿಯನ್ ಕ್ಯಾಶ್ ಮತ್ತು ಲಾಯ್ಡ್ ಗ್ಲಾಸ್‌ಪೂಲ್ ವಿರುದ್ಧ ಸೆಣಸಲಿದ್ದಾರೆ.

****************

ನವದೆಹಲಿಯಲ್ಲಿಂದು ನಡೆಯಲಿರುವ ದಕ್ಷಿಣ ಏಷ್ಯಾ ಬ್ಯಾಸ್ಕೆಟ್‌ಬಾಲ್ ಅಸೋಸಿಯೇಷನ್ ಮಹಿಳಾ ಚಾಂಪಿಯನ್‌ಶಿಪ್ ಫೈನಲ್‌ನಲ್ಲಿ ಭಾರತೀಯ ಮಹಿಳಾ ತಂಡ, ಮಾಲ್ಡೀವ್ಸ್ ವಿರುದ್ಧ ಸೆಣಸಲಿದೆ.

ಪಂದ್ಯಾವಳಿಯಲ್ಲಿ ಅಜೇಯವಾಗಿರುವ ಭಾರತ, ಗುಂಪು ಹಂತದಲ್ಲಿ ಮಾಲ್ಡೀವ್ಸ್ ಮತ್ತು ನೇಪಾಳ ಎರಡೂ ತಂಡಗಳ ಮೇಲೂ ಪ್ರಾಬಲ್ಯ ಸಾಧಿಸಿದ ನಂತರ ಫೈನಲ್‌ಗೆ ಮುನ್ನಡೆದಿದೆ.

*****************

ಮೊನಾಕೊ ಮಹಿಳಾ ಗ್ರ್ಯಾಂಡ್ ಪ್ರಿಕ್ಸ್ ಚೆಸ್ ಪಂದ್ಯದಲ್ಲಿ ಭಾರತದ ಗ್ರ್ಯಾಂಡ್ ಮಾಸ್ಟರ್ ಕೋನೇರು ಹಂಪಿ ೬ನೇ ಸುತ್ತಿನ ಸೋಲಿನ ನಂತರ ಸ್ಪೇನ್‌ನ ಸರಸಾದಾತ್ ಕಡೇಮ್ ವಿರುದ್ಧ ಜಯಗಳಿಸಿದ್ದಾರೆ.

ಈ ಗೆಲುವಿನೊಂದಿಗೆ ಕೋನೇರು ಹಂಪಿ ಒಟ್ಟು ೪ ಅಂಕಗಳನ್ನು ಪಡೆದುಕೊಂಡು ಅಂಕಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದಾರೆ.

*****************

ಇಂಡಿಯನ್ ಸೂಪರ್ ಲೀಗ್-ಐಎಸ್‌ಎಲ್ ಫುಟ್‌ಬಾಲ್ ಟೂರ್ನಿಯಲ್ಲಿ ಕೋಲ್ಕತ್ತಾದ ಸಾಲ್ಟ್ ಲೇಕ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ, ಈಸ್ಟ್ ಬೆಂಗಾಲ್ ಎಫ್‌ಸಿ ತಂಡ, ಹೈದರಾಬಾದ್ ತಂಡವನ್ನು ಎದುರಿಸಲಿದೆ. ಈಸ್ಟ್ ಬೆಂಗಾಲ್ ಪ್ರಸ್ತುತ ಅಂಕಪಟ್ಟಿಯಲ್ಲಿ ಎಂಟನೇ ಸ್ಥಾನದಲ್ಲಿದ್ದರೆ, ಹೈದರಾಬಾದ್ ೧೨ ನೇ ಸ್ಥಾನದಲ್ಲಿದೆ.

ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಬೆಂಗಳೂರು ಎಫ್‌ಸಿ ತಂಡ, ಚೆನ್ನೈಯಿನ್ ಎಫ್‌ಸಿ ತಂಡವನ್ನು ೧-೦ ಅಂತರದಿಂದ ಸೋಲಿಸಿತು. ಈ ಗೆಲುವಿನೊಂದಿಗೆ, ಬೆಂಗಳೂರು ತಂಡ, ಐಎಸ್‌ಎಲ್ ೨೦೨೪-೨೫ರ ಪ್ಲೇಆಫ್‌ನಲ್ಲಿ ಸ್ಥಾನ ಪಡೆದುಕೊಂಡಿದೆ.

*****************

ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್‌ನಲ್ಲಿಂದು ಪಾಕಿಸ್ತಾನದ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ನಡೆಯಲಿರುವ 'ಬಿ' ಗುಂಪಿನ ನಿರ್ಣಾಯಕ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಅಫ್ಘಾನಿಸ್ತಾನವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೨:೩೦ ಕ್ಕೆ ಆರಂಭವಾಗಲಿದೆ.

*********ಮುಕ್ತಾಯ********